**All India Radio: Bangalore**
**National Bulletin In Kannada**
**03.09.2026 19.35 hrs**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

---

ಮುಖ್ಯಾಂಶಗಳು

೧. ವ್ಯಾಪಾರ, ಹೂಡಿಕೆ ಮತ್ತು ಆರ್ಥಿಕ ಸಹಕಾರದ ಬಲವರ್ಧನೆಗೆ ಭಾರತ-ಬೆಲ್ಜಿಯಂ ಬದ್ಧತೆ ; ಐದು ವರ್ಷಗಳಲ್ಲಿ ದ್ವಿಪಕ್ಷೀಯ ವ್ಯಾಪಾರ ದ್ವಿಗುಣಗೊಳಿಸುವ ಗುರಿ

೨. ರಕ್ಷಣಾ ರಾಜತಾಂತ್ರಿಕತೆಗೆ ಸಂಬಂಧಿಸಿದ 'ರಕ್ಷಾ' ಕಾರ್ಯತಂತ್ರ ದಾಖಲೆ ಬಿಡುಗಡೆಗೊಳಿಸಿದ ಸಚಿವ ರಾಜನಾಥ್ ಸಿಂಗ್

೩. ನೇಪಾಳ ಪ್ರವಾಹ: ಮೃತರ ಸಂಖ್ಯೆ ೧ ಸಾವಿರದ ೨೫೨ಕ್ಕೆ ಏರಿಕೆ; ಮೂಲಸೌಕರ್ಯ ಮರುನಿರ್ಮಾಣಕ್ಕೆ ಅಂತಾರಾಷ್ಟ್ರೀಯ ನೆರವಿಗೆ ಮನವಿ

೪. ಚೀನಾ ಮಾಸ್ಟರ್ಸ್ ಬ್ಯಾಡ್ಮಿಂಟನ್; ಪುರುಷರ ಡಬಲ್ಸ್‌ನಲ್ಲಿ ಕ್ವಾರ್ಟರ್ ಫೈನಲ್ ಪ್ರವೇಶಿಸಿದ ಭಾರತದ ಸಾತ್ವಿಕ್-ಚಿರಾಗ್ ಜೋಡಿ

೫. ಮಹಿಳಾ ಟಿ-೨೦ ಏಷ್ಯಾಕಪ್ ಕ್ರಿಕೆಟ್; ಇಂದು ಭಾರತ - ಹಾಂಗ್‌ಕಾಂಗ್ ಮುಖಾಮುಖಿ

---

ವ್ಯಾಪಾರ, ಹೂಡಿಕೆ ಮತ್ತು ಆರ್ಥಿಕ ಸಹಕಾರದ ಬಲವರ್ಧನೆಗೆ ಭಾರತ ಮತ್ತು ಬೆಲ್ಜಿಯಂ ತಮ್ಮ ಬದ್ಧತೆಯನ್ನು ಪುನರುಚ್ಚರಿಸಿವೆ.

ಇಂದು ಬಿಡುಗಡೆಗೊಳಿಸಿದ ಜಂಟಿ ಹೇಳಿಕೆಯಲ್ಲಿ ಉಭಯ ರಾಷ್ಟ್ರಗಳು, ಮುಂಬರುವ ಐದು ವರ್ಷಗಳಲ್ಲಿ ತಮ್ಮ ನಡುವಿನ ದ್ವಿಪಕ್ಷೀಯ ವ್ಯಾಪಾರವನ್ನು ದ್ವಿಗುಣಗೊಳಿಸುವ ಗುರಿಯನ್ನು ನಿಗದಿಪಡಿಸಿವೆ.

ನವದೆಹಲಿಯಲ್ಲಿಂದು ಭಾರತ ಹಾಗೂ ಬೆಲ್ಜಿಯಂ ನಡುವೆ ರಕ್ಷಣಾ ಸಹಕಾರ, ನವೀಕರಿಸಬಹುದಾದ ಇಂಧನ, ಸೈಬರ್ ಅಪರಾಧ ಸೇರಿದಂತೆ ಗಡಿಯಾಚೆಗಿನ ಅಪರಾಧಗಳ ತಡೆ ಹಾಗೂ ರಾಜತಾಂತ್ರಿಕ ತರಬೇತಿ ಕ್ಷೇತ್ರಗಳಲ್ಲಿ ಹಲವು ಪ್ರಮುಖ ಒಪ್ಪಂದಗಳು ಮತ್ತು ತಿಳುವಳಿಕಾ ಪತ್ರಗಳಿಗೆ ಸಹಿ ಹಾಕಲಾಯಿತು.

ಭಾರತಕ್ಕೆ ಮೂರು ದಿನಗಳ ಅಧಿಕೃತ ಪ್ರವಾಸ ಕೈಗೊಂಡಿರುವ ಬೆಲ್ಜಿಯಂ ಪ್ರಧಾನಮಂತ್ರಿ ಬಾರ್ಟ್ ಡಿ ವೆವರ್ ಅವರೊಂದಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ದ್ವಿಪಕ್ಷೀಯ ಮಾತುಕತೆ ನಡೆಸಿ, ಉಭಯ ದೇಶಗಳ ಬಾಂಧವ್ಯ ಹಾಗೂ ಜಾಗತಿಕ ವಿಷಯಗಳ ಕುರಿತು ವಿಸ್ತೃತವಾಗಿ ಚರ್ಚಿಸಿದರು. ಇದೇ ವೇಳೆ ಉಭಯ ರಾಷ್ಟ್ರಗಳ ನಡುವಿನ ದ್ವಿಪಕ್ಷೀಯ

ವ್ಯಾಪಾರದಲ್ಲಿ ಹೆಚ್ಚುತ್ತಿರುವ ವಲಯಗಳ ವೈವಿಧ್ಯೀಕರಣವನ್ನು ಉಭಯ ನಾಯಕರು ಸ್ವಾಗತಿಸಿದರು.

ಜಾಗತಿಕ ಅಸ್ಥಿರತೆಯ ನಡುವೆಯೂ ಭಾರತವು ಶೇಕಡಾ ೭.೮ ರಷ್ಟು ಜಿಡಿಪಿ ಪ್ರಗತಿ ಕಾಯ್ದುಕೊಂಡಿದ್ದು, ಜಗತ್ತಿಗೆ ಭರವಸೆಯ ಕೇಂದ್ರವಾಗಿದೆ ಎಂದು ಈ ವೇಳೆ ಪ್ರಧಾನಿ ನರೇಂದ್ರ ಮೋದಿ ಪ್ರತಿಪಾದಿಸಿದರು.

ಮೊದಲ ಮಹಾಯುದ್ಧದಲ್ಲಿ ಬೆಲ್ಜಿಯಂ ನೆಲದಲ್ಲಿ ಹೋರಾಡಿದ ಸಾವಿರಾರು ಭಾರತೀಯ ಯೋಧರ ತ್ಯಾಗ, ಎರಡೂ ದೇಶಗಳ ಐತಿಹಾಸಿಕ ಬಾಂಧವ್ಯಕ್ಕೆ ಸಾಕ್ಷಿಯಾಗಿದೆ ಎಂದು ಸ್ಮರಿಸಿದ ಪ್ರಧಾನಿ, 'ಜೋರಾವರ್' ಟ್ಯಾಂಕ್ ನಿರ್ಮಾಣ ಹಾಗೂ ಆಂಧ್ರಪ್ರದೇಶದ ಕಾಕಿನಾಡದಲ್ಲಿ ನಿರ್ಮಾಣವಾಗುತ್ತಿರುವ ಬೃಹತ್ ಗ್ರೀನ್ ಅಮೋನಿಯಾ ಯೋಜನೆಯಲ್ಲಿ ಎರಡೂ ದೇಶಗಳು ಜಂಟಿಯಾಗಿ ಕಾರ್ಯನಿರ್ವಹಿಸುತ್ತಿವೆ ಎಂದು ತಿಳಿಸಿದರು.

ಇನ್ನು, ಸೆಮಿಕಂಡಕ್ಟರ್ ಮತ್ತು ನಿರ್ಣಾಯಕ ಖನಿಜಗಳ ಮರುಬಳಕೆಯಲ್ಲೂ ಜಂಟಿಯಾಗಿ ಕೆಲಸ ಮಾಡಲು ಉಭಯ ರಾಷ್ಟ್ರಗಳು ನಿರ್ಧರಿಸಿವೆ.

ಭಯೋತ್ಪಾದನಾ ನಿಗ್ರಹಕ್ಕೆ ಸಮಗ್ರ ಮತ್ತು ಜಾಗತಿಕ ದೃಷ್ಟಿಕೋನವನ್ನು ಅನುಸರಿಸುವ ಬದ್ಧತೆಯನ್ನು ಉಭಯ ರಾಷ್ಟ್ರಗಳು ಪುನರುಚ್ಚರಿಸಿದ್ದು, ಅಂತಾರಾಷ್ಟ್ರೀಯ ಸಮುದಾಯ ಭಯೋತ್ಪಾದನಾ ಸಂಘಟನೆಗಳು, ಭಯೋತ್ಪಾದಕ ಜಾಲಗಳು, ಅವರ ಅಡಗು ತಾಣ ಮತ್ತು ಹಣಕಾಸು ಮೂಲಗಳ ವಿರುದ್ಧ ಒಗ್ಗಟ್ಟಿನಿಂದ ಕ್ರಮಕೈಗೊಳ್ಳಬೇಕು ಎಂದು ತಿಳಿಸಿವೆ.

ಬೆಲ್ಜಿಯಂ ಪ್ರಧಾನಿ ಬಾರ್ಟ್ ಡಿ ವೆವರ್ ಅವರು ಭಾರತವನ್ನು ವಿಶ್ವದ ಅತಿ ದೊಡ್ಡ ಪ್ರಜಾಪ್ರಭುತ್ವ ಹಾಗೂ ವೇಗವಾಗಿ ಬೆಳೆಯುತ್ತಿರುವ ಆರ್ಥಿಕ ಶಕ್ತಿ ಎಂದು ಬಣ್ಣಿಸಿದ್ದು, ತಂತ್ರಜ್ಞಾನ ಮತ್ತು ವಾಣಿಜ್ಯ ರಂಗದಲ್ಲಿ ಭಾರತದೊಂದಿಗಿನ ಸಹಭಾಗಿತ್ವವನ್ನು ಮತ್ತಷ್ಟು ವಿಸ್ತರಿಸುವುದಾಗಿ ಹೇಳಿದರು.

---

ನವದೆಹಲಿಯಲ್ಲಿಂದು ಸೆಶೆಲ್ಸ್ ಶಾಸನಸಭೆಯ ಸಭಾಪತಿ ಅಜರೆಲ್ ಎರ್ನೆಸ್ತಾ ಅವರ ನೇತೃತ್ವದ ಸಂಸದೀಯ ನಿಯೋಗವನ್ನು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಭೇಟಿಯಾಗಿ, ಉಭಯ ದೇಶಗಳ ನಡುವಿನ ಸುದೀರ್ಘ ಹಾಗೂ ಪ್ರಜಾಸತ್ತಾತ್ಮಕ ಮೌಲ್ಯಗಳ ಆಧಾರಿತ ಬಾಂಧವ್ಯವನ್ನು ಪುನರುಚ್ಚರಿಸಿದ್ದಾರೆ.

ಈ ಸಭೆಯಲ್ಲಿ ಕಡಲ ಭದ್ರತೆ, ನವೀಕರಿಸಬಹುದಾದ ಇಂಧನ, ಸಾಗರೋತ್ಪನ್ನ ವಲಯದ ಸಹಕಾರ ಮತ್ತು ಸಾಮರ್ಥ್ಯ ವೃದ್ಧಿಯ ಕ್ಷೇತ್ರಗಳಲ್ಲಿ ಭಾರತ-ಸೆಶೆಲ್ಸ್ ಸಹಭಾಗಿತ್ವವನ್ನು ಮತ್ತಷ್ಟು ಬಲಪಡಿಸುವ ಕುರಿತು ವಿಸ್ತೃತ ಚರ್ಚೆ ನಡೆಯಿತು.

---

ನವದೆಹಲಿಯಲ್ಲಿಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ರಕ್ಷಣಾ ರಾಜತಾಂತ್ರಿಕತೆಗೆ ಸಂಬಂಧಿಸಿದ 'ರಕ್ಷಾ' ಎಂಬ ಮಹತ್ವದ ದಾಖಲೆಯನ್ನು ಬಿಡುಗಡೆ ಮಾಡಿದರು.

ಮುಂದಿನ ಹತ್ತು ವರ್ಷಗಳಲ್ಲಿ ಜಾಗತಿಕ ರಕ್ಷಣಾ ಪಾಲುದಾರಿಕೆಯನ್ನು ವಿಸ್ತರಿಸುವ ನಿಟ್ಟಿನಲ್ಲಿ ಭಾರತದ ಕಾರ್ಯತಾಂತ್ರಿಕ ದೃಷ್ಟಿಕೋನ ಮತ್ತು ಮಾರ್ಗಸೂಚಿಯನ್ನು ಈ ಸಮಗ್ರ ದಾಖಲೆಯು ಒಳಗೊಂಡಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ದೇಶದ ಭದ್ರತಾ ಗುರಿಗಳನ್ನು ಜಾಗತಿಕ ಸಹಕಾರದೊಂದಿಗೆ ಸಂಯೋಜಿಸುವ ಮೂಲಕ ದೀರ್ಘಕಾಲೀನ ಸ್ಥಿರತೆ ಹಾಗೂ ಪರಸ್ಪರ ಪ್ರಗತಿಯನ್ನು ಸಾಧಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ.

ಭಾರತದ ವಿದೇಶಾಂಗ ನೀತಿಯಲ್ಲಿ ರಕ್ಷಣಾ ರಾಜತಾಂತ್ರಿಕತೆಯು ಪ್ರಮುಖ ಅಂಶವಾಗಿದ್ದು, ಜಾಗತಿಕ ಮಟ್ಟದಲ್ಲಿ ಶಾಂತಿ, ಸ್ಥಿರತೆ ಹಾಗೂ ನಿಯಮಾಧಾರಿತ ವ್ಯವಸ್ಥೆಯನ್ನು ಕಾಯ್ದುಕೊಳ್ಳಲು 'ರಕ್ಷಾ' ಚೌಕಟ್ಟಿನ ದಾರಿದೀಪವಾಗಲಿದೆ.

---

ಪ್ರಸಕ್ತ ಹಣಕಾಸು ವರ್ಷದ ಮೊದಲ ತ್ರೈಮಾಸಿಕದಲ್ಲಿ ಭಾರತ ಸಾಧಿಸಿರುವ ಶೇಕಡಾ ೭.೮ ರಷ್ಟು ಜಿಡಿಪಿ ಪ್ರಗತಿಯಲ್ಲಿ ಸಣ್ಣ ಮತ್ತು ಮಧ್ಯಮ ಉದ್ಯಮಗಳ ಪಾತ್ರ ಪ್ರಮುಖವಾಗಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಶ್ಲಾಘಿಸಿದ್ದಾರೆ.

ನವದೆಹಲಿಯಲ್ಲಿ ಆಯೋಜಿಸಲಾಗಿದ್ದ 'ಮುಕ್ತ ವ್ಯಾಪಾರ ಒಪ್ಪಂದಗಳ ಸದ್ಬಳಕೆ' ಕುರಿತ ರಾಷ್ಟ್ರೀಯ ಕಾರ್ಯಾಗಾರದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ದೇಶದ ರಫ್ತು ವ್ಯಾಪಾರವನ್ನು ಜಾಗತಿಕ ಮಟ್ಟದಲ್ಲಿ ಹೆಚ್ಚಿಸಲು ಭಾರತ ಮಾಡಿಕೊಳ್ಳುತ್ತಿರುವ ಮುಕ್ತ ವ್ಯಾಪಾರ ಒಪ್ಪಂದಗಳ ಸೌಲಭ್ಯಗಳನ್ನು ಗರಿಷ್ಠ ಪ್ರಮಾಣದಲ್ಲಿ ಬಳಸಿಕೊಳ್ಳುವಂತೆ ಅವರು ಕರೆ ನೀಡಿದರು.

---

ನೇಪಾಳದಲ್ಲಿ ಸಂಭವಿಸಿದ ಭೀಕರ ಪ್ರವಾಹದಿಂದಾಗಿ ಮೃತಪಟ್ಟವರ ಸಂಖ್ಯೆ ೧ ಸಾವಿರದ ೨೫೨ಕ್ಕೆ ಏರಿಕೆಯಾಗಿದ್ದು, ಸುಮಾರು ೪ ಸಾವಿರದ ೨೧೬ ಜನರು ಇನ್ನೂ ನಾಪತ್ತೆಯಾಗಿದ್ದಾರೆ.

ಪ್ರವಾಹದ ಹಿನ್ನೆಲೆಯಲ್ಲಿ ಹಾನಿಗೊಳಗಾದ ಮೂಲಸೌಕರ್ಯಗಳ ಪುನರ್ನಿರ್ಮಾಣ ಹಾಗೂ ಪುನರ್ವಸತಿಗಾಗಿ ನೇಪಾಳ ಸರ್ಕಾರ ಅಂತಾರಾಷ್ಟ್ರೀಯ ಸಮುದಾಯದಿಂದ ಹೆಚ್ಚುವರಿ ನೆರವು ಕೋರಲು ನಿರ್ಧರಿಸಿದೆ.

ಕಠ್ಮಂಡುವಿನಲ್ಲಿ ರಾಜತಾಂತ್ರಿಕ ನಿಯೋಗಗಳು ಹಾಗೂ ವಿಶ್ವಬ್ಯಾಂಕ್, ಏಷ್ಯನ್ ಅಭಿವೃದ್ಧಿ ಬ್ಯಾಂಕ್ ಮತ್ತು ವಿಶ್ವಸಂಸ್ಥೆಯ ಪ್ರತಿನಿಧಿಗಳೊಂದಿಗೆ ನಡೆಸಿದ ಸಭೆಯಲ್ಲಿ ನೇಪಾಳದ ವಿದೇಶಾಂಗ ಸಚಿವ ಶಿಶಿರ್ ಖನಾಲ್ ಈ ಮಾಹಿತಿ ನೀಡಿದ್ದಾರೆ.

ಪ್ರವಾಹದಲ್ಲಿ ನಾಪತ್ತೆಯಾಗಿರುವ ೫೮೩ ವಿದೇಶಿ ಪ್ರಜೆಗಳ ಸುರಕ್ಷತೆಗೆ ಆದ್ಯತೆ ನೀಡಲಾಗಿದ್ದು, ಹಿಮಾಲಯ ಪ್ರದೇಶದಲ್ಲಿ ಹೆಚ್ಚುತ್ತಿರುವ ಹವಾಮಾನ ವೈಪರೀತ್ಯ ಹಾಗೂ ಪ್ರಕೃತಿ ವಿಕೋಪದ ಅಪಾಯಗಳನ್ನು ತಗ್ಗಿಸಲು ತಕ್ಷಣದ ಜಾಗತಿಕ ನೆರವಿನ ಅಗತ್ಯವಿದೆ ಎಂದು ಅವರು ಪ್ರತಿಪಾದಿಸಿದ್ದಾರೆ.

---

ಹಿಮನದಿ ಸರೋವರ ಸ್ಫೋಟ, ಪ್ರವಾಹ ಮತ್ತು ಹಿಮಕುಸಿತದ ಅಪಾಯದ ಹಿನ್ನೆಲೆಯಲ್ಲಿ ಅಂತಹ ಅಪಾಯ ತಡೆಗೆ ಹಿಮಾಲಯ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳ ಸಿದ್ಧತೆಯನ್ನು ಕೇಂದ್ರ ಗೃಹ ಕಾರ್ಯದರ್ಶಿ ಗೋವಿಂದ್ ಮೋಹನ್ ಇಂದು ಪರಿಶೀಲಿಸಿದರು.

ಅಪಾಯಕ್ಕೆ ಒಳಗಾಗಬಹುದಾದ ಹಿಮನದಿ ಸರೋವರಗಳು ಮತ್ತು ಹಿಮಕುಸಿತ ಸಂಭವನೀಯ ಪ್ರದೇಶಗಳ ನಿರಂತರ ಮೇಲ್ವಿಚಾರಣೆ, ಮುನ್ನೆಚ್ಚರಿಕೆ ವ್ಯವಸ್ಥೆ ಹಾಗೂ ಸಂತ್ರಸ್ತರ ತ್ವರಿತ ಸ್ಥಳಾಂತರಕ್ಕೆ ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಅವರು ಸೂಚಿಸಿದರು.

---

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ತಮ್ಮ ಲೋಕಸಭಾ ಕ್ಷೇತ್ರ ವಾರಾಣಸಿಯ ಪ್ರವಾಹ ಪರಿಸ್ಥಿತಿಯ ಕುರಿತು ಪರಿಶೀಲನೆ ನಡೆಸಿದರು. ಜಿಲ್ಲಾಧಿಕಾರಿ ಸತ್ಯೇಂದ್ರ ಕುಮಾರ್ ಅವರೊಂದಿಗೆ ದೂರವಾಣಿ ಮೂಲಕ ಮಾತನಾಡಿದ ಅವರು, ಪ್ರವಾಹ ಪರಿಸ್ಥಿತಿಯ ಕುರಿತು ವಿವರವಾದ ಮಾಹಿತಿ ಪಡೆದರು.

ಪ್ರವಾಹ ಪರಿಹಾರ ಶಿಬಿರಗಳಲ್ಲಿ ಮಾಡಲಾಗಿರುವ ವ್ಯವಸ್ಥೆಗಳ ಬಗ್ಗೆಯೂ ಪ್ರಧಾನಿ ವಿಚಾರಿಸಿದರು. ಪ್ರವಾಹ ಪರಿಹಾರ ಕಾರ್ಯಾಚರಣೆಗಳನ್ನು ನಿರಂತರವಾಗಿ ಮೇಲ್ವಿಚಾರಣೆ ನಡೆಸಬೇಕು ಹಾಗೂ ಸಂತ್ರಸ್ತರಿಗೆ ತಕ್ಷಣದ ನೆರವು ಒದಗಿಸಬೇಕು ಎಂದು ಅವರು ಸೂಚಿಸಿದರು.

ಇದೇ ವೇಳೆ, ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು ಫರೂಖಾಬಾದ್ ಜಿಲ್ಲೆಯ ಪ್ರವಾಹ ಪೀಡಿತ ಪ್ರದೇಶಗಳ ವೈಮಾನಿಕ ಸಮೀಕ್ಷೆ ನಡೆಸಿದರು.

ಉತ್ತರ ಪ್ರದೇಶದ ೩೨ ಜಿಲ್ಲೆಗಳು ಇದುವರೆಗೆ ಪ್ರವಾಹದಿಂದ ಬಾಧಿತವಾಗಿವೆ. ಸದ್ಯ ೨೨ ಜಿಲ್ಲೆಗಳಲ್ಲಿ ಪ್ರವಾಹದ ಪರಿಣಾಮ ಮುಂದುವರಿದಿದೆ. ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಸರ್ಕಾರ ವ್ಯಾಪಕ ಪರಿಹಾರ ಜಾಲವನ್ನು ಸ್ಥಾಪಿಸಿದೆ.

---

ನಾವೀನ್ಯತೆ, ಗುಣಮಟ್ಟ ಹಾಗೂ ಸ್ಪರ್ಧಾತ್ಮಕ ದರಗಳ ಆಧಾರದಲ್ಲಿ ಭಾರತವು ವಿಶ್ವದ ಅಗ್ರ ಆಟೋಮೊಬೈಲ್ ಉದ್ಯಮವಾಗುವ ಸಾಮರ್ಥ್ಯ ಹೊಂದಿದೆ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ.

ನವದೆಹಲಿಯಲ್ಲಿ ನಡೆದ ಭಾರತೀಯ ವಾಹನ ತಯಾರಕರ ಸಂಘದ ೬೬ನೇ ವಾರ್ಷಿಕ ಸಮಾವೇಶವನ್ನುದ್ದೇಶಿಸಿ ಮಾತನಾಡಿದ ಅವರು, ದೇಶದ ಜಿಎಸ್‌ಟಿ ಸಂಗ್ರಹದಲ್ಲಿ ವಾಹನೋದ್ಯಮದ ಕೊಡುಗೆ ಶೇಕಡಾ ೧೫ರಷ್ಟಿದ್ದು, ಸುಮಾರು ೪ ಕೋಟಿ ನೇರ ಮತ್ತು ಪರೋಕ್ಷ ಉದ್ಯೋಗಗಳಿಗೆ ಈ ಕ್ಷೇತ್ರ ಬೆಂಬಲ ನೀಡುತ್ತಿದೆ ಎಂದು ತಿಳಿಸಿದರು.

___________________

ಚೀನಾದ ಶೆನ್‌ಝೆನ್‌ನಲ್ಲಿ ನಡೆಯುತ್ತಿರುವ ಚೀನಾ ಮಾಸ್ಟರ್ಸ್ ಸೂಪರ್ ೭೫೦ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ಭಾರತದ ಅಗ್ರ ಪುರುಷರ ಡಬಲ್ಸ್ ಜೋಡಿ ಸಾತ್ವಿಕ್‌ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಕ್ ಶೆಟ್ಟಿ, ಕ್ವಾರ್ಟರ್‌ಫೈನಲ್ ಪ್ರವೇಶಿಸಿದ್ದಾರೆ. ಪ್ರಿ-ಕ್ವಾರ್ಟರ್‌ಫೈನಲ್‌ನಲ್ಲಿಂದು ಫ್ರಾನ್ಸ್‌ನ ಕ್ರಿಸ್ಟೋ ಮತ್ತು ಟೋಮಾ ಜೂನಿಯರ್ ಪೊಪೊವ್ ಜೋಡಿ ವಿರುದ್ಧ ಅವರು ೨೧-೧೫, ೨೨-೨೪, ೨೧-೯ ಅಂತರದಿಂದ ಗೆಲುವು ಸಾಧಿಸಿದರು.

ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಭಾರತದ ಅನುಭವಿ ಆಟಗಾರ ಕಿಡಂಬಿ ಶ್ರೀಕಾಂತ್ ಕೆನಡಾದ ವಿಶ್ವದ ೯ನೇ ಕ್ರಮಾಂಕದ ಆಟಗಾರ ವಿಕ್ಟರ್ ಲೈ ಅವರನ್ನು ೨೧-೧೮, ೨೧-೧೯ ನೇರ ಸೆಟ್‌ಗಳಿಂದ ಮಣಿಸಿ ಕ್ವಾರ್ಟರ್‌ಫೈನಲ್‌ಗೆ ಲಗ್ಗೆಯಿಟ್ಟಿದ್ದು, ನಾಳೆ ನಡೆಯಲಿರುವ ಪಂದ್ಯದಲ್ಲಿ ಹಾಂಗ್ ಕಾಂಗ್‌ನ ಲೀ ಚೆಕ್ ಯು ಅವರನ್ನು ಎದುರಿಸಲಿದ್ದಾರೆ.

___________________

ದುಬೈ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಮಹಿಳಾ ಟಿ-೨೦ ಏಷ್ಯಾಕಪ್ ಕ್ರಿಕೆಟ್ ಪಂದ್ಯಾವಳಿಯ ತನ್ನ ಎರಡನೇ ಗುಂಪು 'ಎ' ಪಂದ್ಯದಲ್ಲಿ ಭಾರತ ತಂಡ ಇಂದು ಹಾಂಗ್‌ಕಾಂಗ್ ತಂಡದ ವಿರುದ್ಧ ಸೆಣಸಲಿದೆ.

ಪಂದ್ಯ ಭಾರತೀಯ ಕಾಲಮಾನ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ.

__________ ಮುಕ್ತಾಯ _________